**Akashvani : Bangalore**
**Regional Bulletin In Kannada**
**18.10.2024 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**18.10.2024 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಮೈಸೂರಿನಲ್ಲಿ ಮುಡಾ ಕಚೇರಿ ಮೇಲೆ ಇಡಿ ಅಧಿಕಾರಿಗಳ ದಾಳಿ - ಇಂದು ಮತ್ತು ನಾಳೆ ಕಡತಗಳ ಪರಿಶೀಲನೆ**

**೨. ಇತ್ತೀಚಿನ ಮಳೆಯಿಂದ ಬೆಂಗಳೂರು ಅವ್ಯವಸ್ಥೆಯ ಆಗರವಾಗಲು ರಾಜ್ಯ ಸರ್ಕಾರದ ನಿರ್ಲಕ್ಷ್ಯವೇ ಕಾರಣ - ಆರ್.ಅಶೋಕ ಟೀಕೆ**

**೩. ಕೆಜಿಎಫ್‌ನಲ್ಲಿ ನಗರಾಭಿವೃದ್ಧಿ ಇಲಾಖೆ ವತಿಯಿಂದ ಇಂಟಿಗ್ರೇಟೆಡ್ ಟೌನ್‌ಶಿಪ್ ನಿರ್ಮಾಣ - ಬೈರತಿ ಸುರೇಶ್**

**೪. ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ೬ ಮತಗಟ್ಟೆಗಳ ಸ್ಥಳಾಂತರ ಹಾಗೂ ೩೪ ಮತಗಟ್ಟೆಗಳ ಹೆಸರು ಪರಿಷ್ಕರಣೆಗೆ ಚುನಾವಣಾ ಆಯೋಗದ ಅನುಮೋದನೆ**

**೫. ಎಚ್‌ಐವಿ ಮತ್ತು ಏಡ್ಸ್ ಜಾಗೃತಿಗಾಗಿ ಬೆಳಗಾವಿಯಲ್ಲಿ ನಾಳೆ ರಾಜ್ಯ ಮಟ್ಟದ ರೆಡ್‌ರನ್ ಮ್ಯಾರಥಾನ್**

**<><*<><>*><>**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಕಚೇರಿಯ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಇಂದು ದಾಳಿ ನಡೆಸಿದ್ದು, ನಿವೇಶನ ಹಂಚಿಕೆಯ ಪ್ರಮುಖ ಕಡತಗಳ ಪರಿಶೀಲನೆ ನಡೆಸುತ್ತಿದ್ದಾರೆ. ೫೦:೫೦ ಅನುಪಾತದ ಯೋಜನೆಯ ಅಡಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರು ಅಕ್ರಮವಾಗಿ ೧೪ ನಿವೇಶನಗಳನ್ನು ಪಡೆದಿದ್ದಾರೆ ಹಾಗೂ ಮುಡಾದಲ್ಲಿ ಅಕ್ರಮ ನಡೆದಿದೆ ಎಂದು ಸಾಮಾಜಿಕ ಕಾರ್ಯಕರ್ತ ಸ್ನೇಹ ಕೃಷ್ಣ ಅವರು ಇಡಿ ಸಂಸ್ಥೆಗೆ ದೂರು ನೀಡಿದ ಹಿನ್ನೆಲೆಯಲ್ಲಿ ಈ ಬೆಳವಣಿಗೆ ನಡೆದಿದೆ. ಇಂದು ಬೆಳಗ್ಗೆ ಮೈಸೂರು ನಗರಾಭಿವೃದ್ಧಿ ಕಚೇರಿ ತೆರೆಯುತ್ತಿದ್ದಂತೆಯೇ ಇಡಿ ಅಧಿಕಾರಿಗಳ ಆಗಮನವಾಯಿತು. ಇಂದು ಮತ್ತು ನಾಳೆ ಕಡತಗಳ ಪರಿಶೀಲನೆ ಮುಂದುವರೆಯಲಿದೆ. ಈಗಾಗಲೇ ಅಧಿಕಾರಿಗಳು ಕೇಳಿರುವ ಎಲ್ಲ ದಾಖಲಾತಿಗಳನ್ನು ಮುಡಾದ ಅಧಿಕಾರಿಗಳು ಒದಗಿಸುತ್ತಿದ್ದಾರೆ. ಕೇಂದ್ರೀಯ ಮೀಸಲು ಪೊಲೀಸ್ ಪಡೆ ಸಿಬ್ಬಂದಿಯ ಬಿಗಿಭದ್ರತೆಯೊಂದಿಗೆ ಇಡಿ ಅಧಿಕಾರಿಗಳ ತಂಡದ ಕಲಾಪ ಪ್ರಗತಿಯಲ್ಲಿದೆ. ಇಡಿ ತಂಡದಲ್ಲಿ ೨೦ಕ್ಕೂ ಹೆಚ್ಚು ಅಧಿಕಾರಿಗಳು

ಭಾಗವಹಿಸಿದ್ದಾರೆ. ಮತ್ತೊಂದೆಡೆ, ಮುಡಾ ಪ್ರಕರಣದ ಆನೇ ಆರೋಪಿ ದೇವರಾಜು ಅವರ ಬೆಂಗಳೂರು ಕೆಂಗೇರಿ ನಿವಾಸದ ಮೇಲೂ ಇಡಿ ಅಧಿಕಾರಿಗಳ ತಂಡದ ದಾಳಿ ನಡೆಯುತ್ತಿದೆ. ಈ ನಡುವೆ, ಮೈಸೂರು ಪ್ರಾಧಿಕಾರದ ಕಚೇರಿ ಮೇಲೆ ಜಾರಿನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿರುವುದು ಒಂದು ಬೆದರಿಕೆಯ ತಂತ್ರವಾಗಿದೆ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಪ್ರತಿಕ್ರಿಯಿಸಿದ್ದಾರೆ. ಇದು ದುರುದ್ದೇಶ ಪೂರ್ವಕ, ರಾಜಕೀಯ ಪ್ರೇರಿತ ದಾಳಿಯಾಗಿದೆ ಎಂದು ಅವರು ಟೀಕಿಸಿದ್ದಾರೆ. ಕೇಂದ್ರ ಸರ್ಕಾರ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಯತ್ನಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

**<><*<><>*><>**

ರಾಜಧಾನಿ ಬೆಂಗಳೂರಿನಲ್ಲಿ ಕಳೆದ ಕೆಲ ದಿನಗಳಿಂದ ಸತತ ಮಳೆಯಾಗುತ್ತಿರುವ ಪರಿಣಾಮವಾಗಿ ಮಹಾನಗರದಲ್ಲಿ ರಸ್ತೆಗಳು ಕೆರೆಗಳಂತಾಗಿವೆ. ಕಾಂಗ್ರೆಸ್ ಸರ್ಕಾರ ತನ್ನ ಲಾಭಕ್ಕಾಗಿ ಆಡಳಿತ ನಡೆಸುತ್ತಿದ್ದು, ಜನಸಾಮಾನ್ಯರ ಹಿತವನ್ನು ನಿರ್ಲಕ್ಷಿಸಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ಟೀಕಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉದ್ಯಾನ ನಗರಿ, ಹಸಿರು ನಗರ, ಐಟಿ, ನವೋದ್ಯಮಗಳ ನಗರ ಎಂದು ಹೆಸರಾಗಿರುವ ಬೆಂಗಳೂರು ನಗರ ಈಗ ರಾಜ್ಯ ಸರ್ಕಾರದ ನಿರ್ಲಕ್ಷ್ಯದಿಂದಾಗಿ ರಸ್ತೆ ಗುಂಡಿಗಳ ನಗರ, ಜಲಪಾತಗಳ ನಗರ ಎನ್ನುವ ನಗೆಪಾಟಲಿಗೆ ಗುರಿಯಾಗಿದೆ ಎಂದು ಹೇಳಿದ್ದಾರೆ. ಬೆಂಗಳೂರು ಮಹಾನಗರಕ್ಕೆ ಬ್ರ್ಯಾಂಡ್ ಮಾನ್ಯತೆ ತರುವ ಭರವಸೆ ನೀಡುತ್ತಿರುವ ಕಾಂಗ್ರೆಸ್ ಸರ್ಕಾರ ಈಗ ಕೆಲವೇ ದಿನಗಳ ಮಳೆಯಿಂದ ಆಗಿರುವ ಅವ್ಯವಸ್ಥೆಗಳನ್ನು ಸಮರೋಪಾದಿಯಲ್ಲಿ ಸರಿಪಡಿಸಲು ಆದ್ಯತೆ ನೀಡಬೇಕು. ಬೆಂಗಳೂರಿನ ರಸ್ತೆಗಳು ಮತ್ತು ರಾಜಕಾಲುವೆಗಳ ಶ್ರೀಘ್ರ ದುರಸ್ತಿಯತ್ತ ತಕ್ಷಣ ಗಮನಹರಿಸಬೇಕು, ಇದಕ್ಕೆ ಅಗತ್ಯವಿರುವ ವಿಶೇಷ ಅನುಧಾನವನ್ನು ಕೂಡಲೇ ಒದಗಿಸಬೇಕು ಎಂದು ಆರ್.ಅಶೋಕ ಆಗ್ರಹಪಡಿಸಿದ್ದಾರೆ.

**<><*<><>*><>**

ಕೋಲಾರ ಜಿಲ್ಲೆಯ ಕೆಜಿಎಫ್‌ನಲ್ಲಿ ನಗರಾಭಿವೃದ್ಧಿ ಇಲಾಖೆ ವತಿಯಿಂದ ಇಂಟಿಗ್ರೇಟೆಡ್ ಟೌನ್‌ಶಿಪ್ ನಿರ್ಮಾಣ ಮಾಡಲಾಗುವುದು ಎಂದು ಇಲಾಖೆಯ ಸಚಿವ ಭೈರತಿ ಸುರೇಶ್ ತಿಳಿಸಿದ್ದಾರೆ. ಅವರು ಇಂದು, ಬೆಮೆಲ್‌ನಿಂದ ಹಿಂಪಡೆಯಲಾಗಿರುವ ೨೯೪ ಎಕರೆ ಜಾಗದಲ್ಲಿ ಇಂಟಿಗ್ರೇಟೆಡ್ ಟೌನ್‌ಶಿಪ್ ನಿರ್ಮಾಣ ಮಾಡುವ ಕುರಿತಂತೆ ಸ್ಥಳ ಪರಿಶೀಲನೆ ಮಾಡಿದರು. ಉದ್ದೇಶಿತ ಟೌನ್‌ಶಿಪ್‌ನಲ್ಲಿ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ವಾಣಿಜ್ಯ ಕೇಂದ್ರ, ಶಿಕ್ಷಣ ಮತ್ತು ಆರೋಗ್ಯ ಕೇಂದ್ರ, ಉದ್ಯಾನಗಳು ಮತ್ತು ವಸತಿ ಸಮುಚ್ಚಯ ನಿರ್ಮಿಸಲಾಗುವುದು ಎಂದು ಅವರು ತಿಳಿಸಿದರು. ಚೆನ್ನೈ ಎಕ್ಸ್‌ಪ್ರೆಸ್ ಹೆದ್ದಾರಿ ಪಕ್ಕದಲ್ಲಿರುವ ಈ ಪ್ರದೇಶಕ್ಕೆ ೩೦ ಅಡಿ ಅಗಲದ ಸಂಪರ್ಕ ರಸ್ತೆ ಕಲ್ಪಿಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ ೧೧ ಎಕರೆ ಸರ್ಕಾರಿ ಗೋಮಾಳವನ್ನು ಹಸ್ತಾಂತರಿಸಬೇಕು ಎಂದು ಸಚಿವರು, ತಹಸೀಲ್ದಾರ್ ನಾಗವೇಣಿ ಅವರಿಗೆ ಸೂಚಿಸಿದರು.

**<><*<><>*><>**

ದೂರದರ್ಶನ ಮತ್ತು ಆಕಾಶವಾಣಿ ಪ್ರಸಾರದಲ್ಲಿ ರೈತರು ಮತ್ತು ಮಹಿಳೆಯರ ಕಾರ್ಯಕ್ರಮಗಳಿಗೆ ಆದ್ಯತೆ ನೀಡಲಾಗುತ್ತಿದೆ. ಇದರೊಂದಿಗೆ ವಿದ್ಯಾರ್ಥಿಗಳಿಗೆ ಉಪಯುಕ್ತ ಕಾರ್ಯಕ್ರಮಗಳು, ಧಾರ್ಮಿಕ ಕಾರ್ಯಕ್ರಮಗಳು ಮತ್ತು ಚಲನಚಿತ್ರ ಆಧರಿತ ಕಾರ್ಯಕ್ರಮಗಳಿಗೂ ಹೆಚ್ಚಿನ ಗಮನ ಹರಿಸಬೇಕು ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ರಾಜ್ಯ ಸಚಿವರಾದ ಡಾ. ಎಲ್. ಮುರುಗನ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿಂದು ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಅಧಿಕಾರಿಗಳೊಂದಿಗೆ ಸಚಿವರು ಸಭೆ ನಡೆಸಿದರು. ಜನಪ್ರಿಯ ವ್ಯಕ್ತಿಗಳು, ರಾಜಕೀಯ ಮುತ್ಸದ್ಧಿಗಳ ಚರ್ಚೆ ಮತ್ತು ಧ್ವನಿ ಪ್ರಸಾರದತ್ತಲೂ ಗಮನಹರಿಸಬೇಕು ಎಂದು ಅವರು ಸಲಹೆ ನೀಡಿದರು. ಸೆನ್ಸಾರ್ ಬೋರ್ಡ್, ಚಲನಚಿತ್ರ ನಿರ್ಮಾಪಕರನ್ನು ಸಂಪರ್ಕಿಸಿ ಅವರಲ್ಲಿರುವ ಚಲನಚಿತ್ರಗಳನ್ನು ದೂರದರ್ಶನಕ್ಕೆ ಒದಗಿಸುವ ಕೆಲಸ ಮಾಡಬೇಕು, ಕಾರ್ಯಕ್ರಮಗಳ ಸ್ವರೂಪ ಮತ್ತು ವಸ್ತು ವಿಷಯಗಳ ಆಯ್ಕೆಗೆ ಸಲಹೆಗಾರರನ್ನು ನೇಮಿಸಬೇಕು ಎಂದು ಸಚಿವರು ಸೂಚಿಸಿದರು. ಸಚಿವಾಲಯದ ಮಾಧ್ಯಮ ವಿಭಾಗಗಳು ಸೃಜಿಸುವ ಕಾರ್ಯಕ್ರಮಗಳನ್ನು ವಿನಿಮಯ ಮಾಡಿಕೊಳ್ಳಬೇಕು. ಸಾಮಾಜಿಕ ಜಾಲತಾಣದಲ್ಲಿ ಕಾರ್ಯಕ್ರಮಗಳನ್ನು ಒದಗಿಸುವ ವ್ಯವಸ್ಥೆ ಕಲ್ಪಿಸಬೇಕು ಎಂದು ಸಚಿವ ಮುರುಗನ್ ಸೂಚಿಸಿದರು.

<><*<><>*><>

ಚಿತ್ರದುರ್ಗ ಜಿಲ್ಲೆಯಲ್ಲಿ ೬ ಮತಗಟ್ಟೆಗಳ ಸ್ಥಳಾಂತರ ಹಾಗೂ ೩೪ ಮತಗಟ್ಟೆಗಳ ಹೆಸರು ಪರಿಷ್ಕರಣೆಗೆ ಭಾರತ ಚುನಾವಣಾ ಆಯೋಗ ಅನುಮೋದನೆ ನೀಡಿರುವುದಾಗಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ. ವಿಶೇಷ ಸಂಕ್ಷಿಪ್ತ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಅವರು ಇಂದು ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದರು. ಜಿಲ್ಲಾ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ೨೦೨೫ರ ಸಂಬಂಧ ಮತಗಟ್ಟೆಗಳ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಎಲ್ಲಾ ರಾಜಕೀಯ ಪಕ್ಷಗಳ ಏಜೆಂಟರುಗಳಿಗೆ ಪಟ್ಟಿಯನ್ನು ವಿತರಿಸಲಾಗುವುದು ಎಂದು ಅವರು ತಿಳಿಸಿದರು. ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು ಒಂದು ಸಾವಿರದ ೬೬೧ ಮತಗಟ್ಟೆಗಳಿದ್ದು, ಮೊಳಕಾಲ್ಮೂರು ಕ್ಷೇತ್ರದಲ್ಲಿ ೨೮೫, ಚಳ್ಳಕೆರೆ ೨೬೦, ಚಿತ್ರದುರ್ಗ ೨೮೮, ಹಿರಿಯೂರು ೨೮೬, ಹೊಸದುರ್ಗ ೨೪೨ ಹಾಗೂ ಹೊಳಲ್ಕೆರೆ ಕ್ಷೇತ್ರದಲ್ಲಿ ೨೯೯ ಮತಗಟ್ಟೆಗಳು ಇವೆ. ಈ ಪೈಕಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಮಾತ್ರ ಆರು ಮತಗಟ್ಟೆಗಳ ಸ್ಥಳ ಬದಲಾವಣೆ ಹಾಗೂ ೩೪ ಮತಗಟ್ಟೆಗಳ ಹೆಸರುಗಳನ್ನು ಸರಿಪಡಿಸಿ, ಪ್ರಕಟಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಸಭೆಯಲ್ಲಿ ಮಾಹಿತಿ ನೀಡಿದರು.

<><*<><>*><>

ಜನಸಾಮಾನ್ಯರಲ್ಲಿ ಎಚ್‌ಐವಿ ಮತ್ತು ಏಡ್ಸ್ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ನಾಳೆ ಬೆಳಗಾವಿಯಲ್ಲಿ ರಾಜ್ಯ ಮಟ್ಟದ ರೆಡ್‌ರನ್ ಮ್ಯಾರಥಾನ್ ಆಯೋಜಿಸಲಾಗಿದೆ. ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ ವತಿಯಿಂದ ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಿಂದ ಬೆಳಗ್ಗೆ ೬.೩೦ಕ್ಕೆ

ಮ್ಯಾರಥಾನ್ ಆರಂಭವಾಗಲಿದ್ದು, ಕೃಷ್ಣ ದೇವರಾಯ ವೃತ್ತ ಹಾಗೂ ಕಿತ್ತೂರು ಚೆನ್ನಮ್ಮ ವೃತ್ತ ಮಾರ್ಗದಲ್ಲಿ ತೆರಳಲಿದೆ.  ಎಚ್‌ಐವಿ ಏಡ್ಸ್ ನಿಯಂತ್ರಣ, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ಮತ್ತು ತಾರತಮ್ಯವನ್ನು ತಡೆಗಟ್ಟುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

**<><*<><>*><>**

ದಾವಣಗೆರೆ ಜಿಲ್ಲೆಯಾದ್ಯಂತ ಕಳೆದ ಮೂರು ದಿನಗಳಿಂದ ಧಾರಾಕಾರ ಮಳೆಯಾಗುತ್ತಿದ್ದು, ತರಕಾರಿ, ತೋಟಗಾರಿಕೆ ಮತ್ತು ಬತ್ತದ ಬೆಳೆಗೆ ಅಪಾರ ಹಾನಿಯಾಗಿದೆ. ಜಗಳೂರು ತಾಲೂಕು ಜಿನಗಿಹಳ್ಳ ತುಂಬಿ ಹರಿಯುತ್ತಿದ್ದು, ಹಿರೇಮಲ್ಲನಹೊಳೆ ಗ್ರಾಮ ಜಲಾವೃತವಾಗಿದೆ. ಗ್ರಾಮದ ಕುಟುಂಬಗಳನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ.  ನೆರೆ ಪೀಡಿತ ಪ್ರದೇಶಗಳಿಗೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಭೇಟಿ ನೀಡಿ, ಪರಿಶೀಲಿಸಿದರು.

**<><*<><>*><>**

ದೇಶವಾಸಿಗಳಿಗೆ ಅಗತ್ಯ ಪೌಷ್ಟಿಕ ಆಹಾರ ವಿತರಣೆಗಾಗಿ ಕೇಂದ್ರ ಸರ್ಕಾರ ಸಿರಿಧಾನ್ಯ ಖರೀದಿಯನ್ನು ಹೆಚ್ಚಿಸಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ದೆಹಲಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮೂರನೇ ಅವಧಿ ಆಡಳಿತದಲ್ಲಿ ಹಿಂದೆಂದಿಗಿಂತ ಅಧಿಕ ಸಿರಿಧಾನ್ಯ ಖರೀದಿ ಮಾಡುತ್ತಿದೆ ಎಂದರು. ಕೇಂದ್ರ ಸರ್ಕಾರ, ೨೦೨೩-೨೪ರ ಮುಂಗಾರು ಮಾರುಕಟ್ಟೆ ಋತುವಿನಲ್ಲಿ ೧೨.೪೯ ಲಕ್ಷ ಮೆಟ್ರಿಕ್ ಟನ್ ಸಿರಿಧಾನ್ಯ ಖರೀದಿ ಮಾಡಿದೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇಕಡ ೧೭೦ರಷ್ಟು ಸಿರಿಧಾನ್ಯಗಳ ಖರೀದಿ ಹೆಚ್ಚಳ ಕಂಡಿರುವುದು ಗಮನಾರ್ಹ ಸಂಗತಿಯಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

**<><*<><>*><>**

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ- ನ್ಯೂಜಿಲ್ಯಾಂಡ್ ನಡುವಿನ ಟೆಸ್ಟ್ ಸರಣಿಯ ಮೊದಲ ಪಂದ್ಯದ ಮೂರನೇ ದಿನದಾಟದಲ್ಲಿಂದು ಭಾರತ, ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ಚಹಾ ವಿರಾಮದ ಮೊದಲು ಯಾವುದೇ ವಿಕೆಟ್ ನಷ್ಟವಿಲ್ಲದೆ ೫೭ ರನ್ ಗಳಿಸಿದ್ದು, ೨೯೯ ರನ್‌ಗಳ ಹಿನ್ನಡೆಯಲ್ಲಿತ್ತು.

**<><*<><>*><>**

ಜಾನುವಾರುಗಳ ಆರೋಗ್ಯ ರಕ್ಷಣೆಗಾಗಿ ಇದೇ ೨೧ ರಿಂದ ನವೆಂಬರ್ ೨೦ವರೆಗೆ ರಾಜ್ಯಾದ್ಯಂತ ಕಾಲುಬಾಯಿ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಅವಧಿಯಲ್ಲಿ ರೈತರು ತಮ್ಮ ಜಾನುವಾರುಗಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಬೇಕೆಂದು ಪಶು ಸಂಗೋಪನಾ ಇಲಾಖೆ ಮನವಿ

ಮಾಡಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬಮೂಲ್ ಸಹಯೋಗದೊಂದಿಗೆ ಲಸಿಕಾ ಕಾರ್ಯಕ್ರಮ ನಡೆಯಲಿದೆ. ಒಟ್ಟು ಒಂದು ಸಾವಿರದ ೭೨೫ ಬ್ಲಾಕ್‌ಗಳನ್ನು ವಿಂಗಡಿಸಿದ್ದು, ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಬಮೂಲ್ ಸಿಬ್ಬಂದಿ ಸೇರಿದಂತೆ ಒಟ್ಟು ೩೧೨ ಸಿಬ್ಬಂದಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <><*<>**